# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1569 |
| 2 | ಸದಸ್ಯರ ಹೆಸರು | : | ಶ್ರೀ ಹೆಚ್.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 18.03.2021 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನಾ ಸಚಿವರು, ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ; (ಮಾಹಿತಿ ನೀಡುವುದು) | ಶಾಸಕರ ಅಭಿವೃದ್ಧಿ ಅನುದಾನವನ್ನು ಬಿಡುಗಡೆ ಮಾಡುವುದು ವಿಳಂಬವಾಗುತ್ತಿರುವುದಿಲ್ಲ.<br>ಆರಂಭಿಕ ಶಿಲ್ಕು ಮತ್ತು ಬಿಡುಗಡೆಯಾದ ಅನುದಾನ ಸೇರಿದಂತೆ ಒಟ್ಟಾರೆ ಅನುದಾನದಲ್ಲಿ ಶೇಕಡ 75ರಷ್ಟು ವೆಚ್ಚ ಭರಸಿದ್ದಲ್ಲಿ ಮಾತ್ರ ಮುಂದಿನ ಕಂತಿನ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.<br>ಆರಂಭಿಕ ಶಿಲ್ಕು ಸೇರಿದಂತೆ ಬಿಡುಗಡೆಯಾದ ಅನುದಾನವನ್ನು ಪೂರಕವಾಗಿ ಬಳಕೆ ಮಾಡಿಕೊಳ್ಳುವ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. |
| (ಆ) | ಹಾಲಿ ನೀಡಲಾಗುತ್ತಿರುವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನ ವಾರ್ಷಿಕ ಎರಡು ಕೋಟಿ ರೂಪಾಯಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ, ಈ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಎಷ್ಟು ಹೆಚ್ಚಳ ಮಾಡಲಾಗುವುದು ಮತ್ತು ಯಾವಾಗ ಹೆಚ್ಚಳ ಮಾಡಲಾಗುವುದು? (ಮಾಹಿತಿ ನೀಡುವುದು.) | ಇಲ್ಲ.<br>ಶಾಸಕರ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.<br>ಅನ್ವಯಿಸುವುದಿಲ್ಲ. |

**ಸಂಖ್ಯೆ: ಪಿಡಿಎಸ್ 28 ಕೆಎಲ್ಎಸ್ 2021**

**(ಡಾ|| ನಾರಾಯಣಗೌಡ)**
ಸಚಿವರು,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ